ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಎರಡನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಸೋಮವಾರ, ದಿನಾಂಕ 10ನೇ ಡಿಸೆಂಬರ್, 2018
(ಸಮಯ: ಮಧ್ಯಾಹ್ನ 12.15 ಗಂಟೆಗೆ)

----

1. ಸಂತಾಪ ಸೂಚನೆ

2. ಕಾರ್ಯದರ್ಶಿಯವರ ವರದಿ

ಕಾರ್ಯದರ್ಶಿಯವರು:-

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿ / ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸುವುದು.

3. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೊದಲನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಮೊದಲನೇ ಪಟ್ಟಿ

... 2/ ..

4. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ದೊಡ್ಡನಗೌಡರ ಮಹಾಂತೇಶ ಬಸವಂತರಾಯ್ ಅವರು** – ಕಿತ್ತೂರನ್ನು ತಾಲ್ಲೂಕು ಕೇಂದ್ರವಾಗಿ ಘೋಷಣೆ ಮಾಡಿ, ಸುಮಾರು 7 ವರ್ಷ ಕಳೆದರೂ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಹಣ ನೀಡದೇ ಇರುವುದರಿಂದ ಅಲ್ಲಿನ ಅಭಿವೃದ್ಧಿ ಕಾರ್ಯಗಳು ಕುಂಠಿತಗೊಂಡಿದ್ದು ತಾಲ್ಲೂಕಿನ ಸಮಗ್ರ ಅಭಿವೃದ್ಧಿಗಾಗಿ ವಿಶೇಷ ಪ್ಯಾಕೇಜ್ ನೀಡುವ ಬಗ್ಗೆ ಮಾನ್ಯ ಕಂದಾಯ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯುವುದು.

2) **ಶ್ರೀಮತಿ ಕೆ.ಪೂರ್ಣಿಮಾ ಅವರು** – ತೆಂಗಿನ ಬೆಳೆಯು ಮಳೆಯ ಅಭಾವದಿಂದ / ವಿವಿಧ ರೋಗಗಳಿಂದ ನಾಶವಾಗುತ್ತಿದ್ದು, ಒಂದು ಗಿಡಕ್ಕೆ ರೂ.400/- ರಂತೆ ಪರಿಹಾರ ಮೊತ್ತ ನೀಡಲು ಪ್ರಸ್ತಾಪವಿದ್ದು, ಸದರಿ ಪರಿಹಾರ ಮೊತ್ತವು ಅವೈಜ್ಞಾನಿಕವಾಗಿರುವುದರಿಂದ ಅದನ್ನು ಪರಿಷ್ಕರಿಸಿ ಹೆಚ್ಚಿಸುವ ಬಗ್ಗೆ ಮಾನ್ಯ ತೋಟಗಾರಿಕಾ ಸಚಿವರ ಗಮನ ಸೆಳೆಯುವುದು.

3) **ಶ್ರೀ ಕುಮಾರ ಬಂಗಾರಪ್ಪ ಅವರು** – ಸೊರಬ ತಾಲ್ಲೂಕಿನಲ್ಲಿ ಬರ ಪರಿಹಾರ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳ ಬಗ್ಗೆ ಮಾನ್ಯ ಕಂದಾಯ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯುವುದು.

4) **ಶ್ರೀಮತಿ ಲಕ್ಷ್ಮೀ ಆರ್.ಹೆಬ್ಬಾಳ್ಕರ್ ಅವರು** – ಬೆಳಗಾವಿ ಗ್ರಾಮೀಣ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಹಲಗಾ, ಕೊಂಡಸಕೊಪ್ಪ, ಬಸ್ತವಾಡ, ಕಮಕಾರಕಟ್ಟಿ ಹಾಗೂ ರಕ್ಕಸಕೊಪ್ಪ ಗ್ರಾಮಗಳಲ್ಲಿ ಕುಡಿಯುವ ನೀರಿನ ತೊಂದರೆ ಇರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

5) **ಶ್ರೀ ಕೆ.ಮಹದೇವ ಅವರು** – ನ್ಯಾಯಬೆಲೆ ಅಂಗಡಿಗಳಲ್ಲಿ ಬಯೋ-ಮೆಟ್ರಿಕ್ ಮೂಲಕ ಪಡಿತರ ಪಡೆಯಬೇಕಾಗಿದ್ದು ಕೃಷಿಯಂತಹ ಶ್ರಮದ ಕೆಲಸದಲ್ಲಿ ತೊಡಗಿರುವ ರೈತರ ಬೆರಳಿನ ರೇಖೆಗಳು ಸವೆದಿರುವುದರಿಂದ ಬಯೋಮೆಟ್ರಿಕ್ ನೀಡುವ ಸಮಯದಲ್ಲಿ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳು, ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರ ಗಮನ ಸೆಳೆಯುವುದು.

ಎಸ್. ಮೂರ್ತಿ
ಕಾರ್ಯದರ್ಶಿ

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm